ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 461 ಗ್ರಾಪಂಅ 2020 ದಿನಾಂಕ: 19.06.2020

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ (20 ಅಂಶ ಕಾರ್ಯಕ್ರಮವು ಸೇರಿದಂತೆ) ತ್ರೈಮಾಸಿಕ ಪರಿಶೀಲನಾ ಸಮಿತಿ ಸಭೆಗೆ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಗೆ ಸಂಬಂಧಿಸಿದಂತೆ ನಿಗದಿಪಡಿಸಿರುವ ನಮೂನೆಗಳಲ್ಲಿ ಮಾಹಿತಿ ಪಡೆದು ಪರಿಣಾಮಕಾರಿ ಪರಿಶೀಲನೆ – ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019 ದಿನಾಂಕ:11-06-2019.

* * * * *

ಸಂವಿಧಾನದ 73 ನೇ ತಿದ್ದುಪಡಿಯ ಆಶೋತ್ತರಗಳಂತೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳಿಂದ ವಿವಿಧ ಅಭಿವೃದ್ಧಿ ಕಾರ್ಯಕ್ರಮಗಳ ಜವಾಬ್ದಾರಿಗಳನ್ನು ಪಂಚಾಯತ್ ರಾಜ್ ಸಂಸ್ಥೆಗಳಿಗೆ ವರ್ಗಾಯಿಸಲಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ವಿವಿಧ ಅಭಿವೃದ್ಧಿ ಯೋಜನೆಗಳಡಿ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯಿಂದ ಬಿಡುಗಡೆಗೊಳಿಸುತ್ತಿರುವ ಅನುದಾನಗಳನ್ನು ಸಮರ್ಪಕವಾಗಿ ಬಳಸಿಕೊಂಡು ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿವೆ.

ಗ್ರಾಮ ಪಂಚಾಯತಿ ಮಟ್ಟದಲ್ಲಿ ತ್ರೈಮಾಸಿಕ ಪರಿಶೀಲನಾ ಕೆ.ಡಿ.ಪಿ. ಸಮಿತಿಗೆ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯ ಹೋಬಳಿ / ಗ್ರಾಮ ಪಂಚಾಯತಿ ಮಟ್ಟದಲ್ಲಿನ ಸ್ಥಳೀಯ ಅಧಿಕಾರಿ/ಸಿಬ್ಬಂದಿಗಳಿಂದ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳಿಗೆ ಸಂಬಂಧಿಸಿದ ಯೋಜನೆ ಮತ್ತು ಅನುದಾನದ ವಿವರಗಳನ್ನು ಹಾಗೂ ಇವುಗಳ ಅನುಷ್ಠಾನದಲ್ಲಿ ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪರಾಮರ್ಶಿಸುವುದು ಹಾಗೂ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯ ಯೋಜನೆಗಳ ಅನುಷ್ಠಾನಕ್ಕೆ ಸೂಕ್ತ ಮಾರ್ಗದರ್ಶನ ನೀಡುವ ಉದ್ದೇಶವನ್ನು ಸರ್ಕಾರ ಹೊಂದಿದೆ.

ಮೇಲೆ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದ ಪ್ರತಿಯೊಂದು ಗ್ರಾಮ ಪಂಚಾಯತಿ ಮಟ್ಟದಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಮಿತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 479 ಗ್ರಾಪಂಅ 2019, ದಿನಾಂಕ:11-06-2019 ರಂದು ರಚಿಸಲಾಗಿದೆ. ಅದರನ್ವಯ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯ ಸಂಬಂಧಪಟ್ಟ ಕಿರಿಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗದವರು ಆಹ್ವಾನಿತರಾಗಿರುತ್ತಾರೆ ಎಂದು ಆದೇಶಿಸಲಾಗಿದೆ.

**ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆ:**

ಗ್ರಾಮೀಣ ಪ್ರದೇಶಗಳ ಅಭಿವೃದ್ಧಿ ಹಾಗೂ ಅಭ್ಯುದಯಕ್ಕಾಗಿ ಗುಣಮಟ್ಟದ ಸರ್ವಋತು ಸಂಪರ್ಕ ರಸ್ತೆಗಳನ್ನು ಮಾಪಕ ಸಂಸ್ಥೆಗಳ ಮಾನದಂಡಕ್ಕನುಗುಣವಾಗಿ ನಿರ್ಮಿಸುವುದು ಇದರ ಉದ್ದೇಶವಾಗಿದೆ. ಸ್ಥಳೀಯವಾಗಿ ಲಭ್ಯವಾಗುವ ಸಾಮಗ್ರಿಗಳನ್ನು ರಸ್ತೆ ಕಾಮಗಾರಿಯಲ್ಲಿ ಉಪಯೋಗಿಸುವ ಸಂಬಂಧ ವಿವಿಧ ವಿದ್ಯಾಸಂಸ್ಥೆಗಳಿಂದ ತಾಂತ್ರಿಕ ಕೌಶಲ್ಯತೆಯನ್ನು ಪಡೆದು ಕಡಿಮೆ ವೆಚ್ಚದಲ್ಲಿ ಉತ್ತಮ ತಾಂತ್ರಿಕತೆಯೊಂದಿಗೆ ರಸ್ತೆಗಳನ್ನು ಅಭಿವೃದ್ಧಿಪಡಿಸುವುದು ಮತ್ತು ನಿರ್ಮಾಣದ ನಂತರದ ಐದು ವರ್ಷಗಳ ಅವಧಿಗೆ ಉತ್ತಮವಾಗಿ ನಿರ್ವಹಣೆ ಮಾಡುವುದು, ಗ್ರಾಮೀಣ ರಸ್ತೆ ಅಭಿವೃದ್ಧಿಗಾಗಿ ನಿಗಧಿಪಡಿಸಿದ ಹಣವನ್ನು ಸೂಕ್ತವಾಗಿ ಉಪಯೋಗಿಸಿಕೊಂಡು ನಿಗಧಿತ ಸಮಯದೊಳಗೆ ಕಾಮಗಾರಿಗಳನ್ನು ಪೂರ್ಣಗೊಳಿಸುವುದು, ಇಲಾಖೆಯ ಇಂಜಿನಿಯರ್‌ಗಳಿಗೆ ಹಾಗೂ ಕಾಮಗಾರಿ

ನಿರ್ವಹಿಸುವ ಗುತ್ತಿಗೆದಾರರ ಇಂಜಿನಿಯರ್‌ಗಳಿಗೆ ಸೂಕ್ತ ತಾಂತ್ರಿಕ ತರಬೇತಿ ನೀಡಿ ಇತ್ತೀಚಿನ ತಾಂತ್ರಿಕ ಅಭಿವೃದ್ಧಿಯ ಹಾಗೂ ಹೊಸ ಅವಿಷ್ಕಾರಗಳ ಬಗ್ಗೆ ಮಾಹಿತಿ ನೀಡುವುದು, ಉತ್ತಮ ಗುಣಮಟ್ಟವನ್ನು ಕಾಯ್ದುಕೊಳ್ಳುವುದು ಹಾಗೂ ಸಾರ್ವಜನಿಕ ದೂರಿಗೆ ಸೂಕ್ತವಾಗಿ ಸ್ಪಂದಿಸುವ ವ್ಯವಸ್ಥೆ ಬಲಪಡಿಸುವುದು ಹಾಗೂ ಆಡಳಿತದಲ್ಲಿ ಕಾಮಗಾರಿಯ ನಿರ್ಮಾಣ ಮತ್ತು ನಿರ್ವಹಣೆಯಲ್ಲಿ ಪಾರದರ್ಶಕತೆ ಕಾಯ್ದು ಕೊಳ್ಳುವುದಾಗಿದೆ.

ಜನವಸತಿ, ವಾರ್ಡ್ ಸಭೆ ಹಾಗೂ ಗ್ರಾಮ ಸಭೆ ಮೂಲಕ 5 ವರ್ಷಕ್ಕೆ ದೂರದೃಷ್ಟಿ ಯೋಜನೆ ತಯಾರಿಸಿ ಅದರಿಂದ ವಾರ್ಷಿಕ ಯೋಜನೆಗಳನ್ನು ರೂಪಿಸುವಾಗ ಆದ್ಯತಾ ಪಟ್ಟಿ ಮಾಡುವಾಗ ಈ ಕೆಳಗಿನ ಅಂಶಗಳನ್ನು ಕೇಂದ್ರೀಕರಿಸಿ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯು ಕ್ರಮ ಕೈಗೊಳ್ಳುವುದು.

1) ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ರಸ್ತೆಗಳು, ಸೇತುವೆಗಳು & ಇತರೆ ಸಂಪರ್ಕ ಮಾರ್ಗಗಳ ಅಂಕಿ-ಅಂಶಗಳ ಮಾಹಿತಿ ಕಲೆ ಹಾಕುವುದು.
2) ದುರಸ್ಥಿ ಮತ್ತು ಹೊಸ ನಿರ್ಮಾಣ ವಿವರಣೆಗಳು, ಇತರೆ ಯಾವುದೇ ಹೊಸ ಯೋಜನೆಗಳ ಅನುಷ್ಠಾನದ ಸಂಬಂಧದಲ್ಲಿ ಮಾಹಿತಿ ಒದಗಿಸುವುದು.
3) ಅಂಗನವಾಡಿ ಕೇಂದ್ರಗಳಿಗೆ ಸರ್ವ ಋತು ರಸ್ತೆ ಸಂಪರ್ಕ ಕಲ್ಪಿಸುವುದರಿಂದ ಮಕ್ಕಳು, ಗರ್ಭಿಣಿ ಸ್ತ್ರೀಯರು ಸರಾಗವಾಗಿ ಯಾವುದೇ ಅಡಚಣೆ ಇಲ್ಲದೆ ಕೇಂದ್ರಕ್ಕೆ ತೆರಳಲು ಮೊದಲ ಆದ್ಯತೆ ನೀಡಿದಂತಾಗುವುದು.
4) ಪ್ರಾಥಮಿಕ ಶಾಲೆಗಳಿಗೆ ಸಂಪರ್ಕ ಕಲ್ಪಿಸುವ ರಸ್ತೆಗಳಿಗೆ ಆದ್ಯತೆ ನೀಡುವುದು.
5) ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕೂಡುವ ರಸ್ತೆ ನಿರ್ಮಿಸುವುದು.
6) ಎಸ್.ಸಿ./ಎಸ್.ಟಿ. ಕಾಲೋನಿಗಳಲ್ಲಿ ಹಾಗೂ ಕಾಲೋನಿಗಳಿಗೆ ಕೂಡುವ ರಸ್ತೆ ನಿರ್ಮಿಸುವುದು.
7) District Rural Road P ನಲ್ಲಿ ರಸ್ತೆ ಸೇರಿರುವುದರ ಖಾತರಿ ಪಡಿಸಿಕೊಂಡು ಕ್ರಮ ಕೈಗೊಳ್ಳುವುದು.
8) ವರ್ಷಾವಾರು ಅಭಿವೃದ್ಧಿಗೊಳಿಸಿರುವ ರಸ್ತೆಗಳನ್ನು ಪಟ್ಟಿ ಮಾಡಿ, ಅನುದಾನ ಲಭ್ಯತೆಗನುಗುಣವಾಗಿ ಹೆಚ್ಚು ಹಾಳಾಗಿರುವ ರಸ್ತೆಗಳನ್ನು ಮೊದಲು ದುರಸ್ಥಿಗೊಳಿಸುವುದು.
9) ಪ್ರದಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಅನುಷ್ಠಾನದ ಪರಾಮರ್ಶೆಯೊಂದಿಗೆ ಇತರೆ ಗ್ರಾಮೀಣ ರಸ್ತೆಗಳ ಪರಾಮರ್ಶೆ ನಡೆಸುವುದು.

ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಗ್ರಾಮ ಪಂಚಾಯತಿ ಕೆ.ಡಿ.ಪಿ. ಸಭೆಗೆ ಗ್ರಾಮೀಣ ಸಂಪರ್ಕ, ರಸ್ತೆ ಮತ್ತು ಸೇತುವೆಗಳ ಇಲಾಖೆಯ ಸಂಬಂಧಪಟ್ಟ ಕಿರಿಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗದವರು ನಮೂನೆ-I ರಲ್ಲಿನ ಮಾಹಿತಿಯೊಂದಿಗೆ ಸಭೆಗೆ ಕಡ್ಡಾಯವಾಗಿ ಹಾಜರಾಗಲು ಆದೇಶಿಸಿದೆ.

(ಉಮಾ ಮಹದೇವನ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:
1. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
2. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು (ಈ ಸುತ್ತೋಲೆಯನ್ನು ತಾಲ್ಲೂಕು ಮಟ್ಟದ ಎಲ್ಲಾ ಇಲಾಖಾಧಿಕಾರಿಗಳಿಗೆ ಹಾಗೂ ಎಲ್ಲಾ ಗ್ರಾಮ ಪಂಚಾಯತ್ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ರವರಿಗೆ ಕಳುಹಿಸಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ನಡೆಯುವ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮಗಳು (ಕೆ.ಡಿ.ಪಿ.) ಪ್ರಗತಿ ಪರಿಶೀಲನಾ ಸಭೆಗೆ ಹೋಬಳಿ / ಗ್ರಾಮ ಪಂಚಾಯತಿ ಮಟ್ಟದ ಅಧಿಕಾರಿ / ನೌಕರರು ಹಾಜರಾಗಲು ನಿರ್ದೇಶನ ನೀಡುವುದು).

ಪ್ರತಿ ಮಾಹಿತಿಗಾಗಿ:

1. ಮಾನ್ಯ ಮುಖ್ಯಮಂತ್ರಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
7. ಸರ್ಕಾರದ ಪ್ರಧಾನ ಕಾರ್ಯದರ್ಶಿ (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
8. ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ, ಬಹುಮಹಡಿ ಕಟ್ಟಡ, ಬೆಂಗಳೂರು.
9. ಎಲ್ಲಾ ಆಯುಕ್ತರು / ವ್ಯವಸ್ಥಾಪಕ ನಿರ್ದೇಶಕರುಗಳು, ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
10. ವಿಶೇಷ ಅಧಿಕಾರಿ (ಜಿ.ಪಂ.), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
11. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
12. ಮುಖ್ಯಸ್ಥರು, ವಿಕೇಂದ್ರೀಕರಣ ವಿಶ್ಲೇಷಣಾ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು.
13. ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ.
14. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

## ನಮೂನೆ – I

### 2019–20 ನೇ ಸಾಲಿನಲ್ಲಿ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದಡಿ ಗ್ರಾಮೀಣಾಭಿವೃದ್ಧ ಪಂಚಾಯಿತಿ ರಾಜ್ ಇಲಾಖೆಯು ಸಾಧಿಸಿರುವ ಭೌತಿಕ ಮತ್ತು ಆರ್ಥಿಕ ಪರಾಮರ್ಶೆಯ ವಿವರಗಳು

**ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೀಮಿತವಾಗಿರುವಂತೆ**

ಪಂಚಾಯತ್ ಹೆಸರು : ____________________ ____________________ ಮಾಹೆಯ ಅಂತ್ಯದವರೆವಿಗೆ

| ಕ್ರ. ಸಂ. | ಇಲಾಖೆಯ ಕಾರ್ಯಕ್ರಮಗಳ ವಿವರ | ಭೌತಿಕ ಪ್ರಗತಿ (ಸಂಖ್ಯೆಗಳಲ್ಲಿ) | | ಆರ್ಥಿಕ ಪ್ರಗತಿ (ರೂ. ಲಕ್ಷಗಳಲ್ಲಿ) | |
|---|---|---|---|---|---|
| | | ಗುರಿ | ಸಾಧನೆ | ಲಭ್ಯವಿರುವ ಅನುದಾನ | ಸಾಧಿಸಿರುವ ಪ್ರಗತಿ |
| 1 | ಗ್ರಾಮ ಪಂಚಾಯತಿ ವ್ಯಾಪ್ತಿಗೆ ಬರುವ ರಸ್ತೆಗಳು, ಸೇತುವೆಗಳು & ಇತರೆ ಸಂಪರ್ಕ ಮಾರ್ಗಗಳ ಅಂಕಿ-ಅಂಶಗಳು | | | | |
| 2 | ದುರಸ್ಥಿ ಮತ್ತು ಹೊಸ ನಿರ್ಮಾಣ ವಿವರಣೆಗಳು | | | | |
| 3 | ಇತರೆ ಯಾವುದೇ ಹೊಸ ಯೋಜನೆಗಳ ಅನುಷ್ಠಾನದಲ್ಲಿ ಮಾಹಿತಿ ಒದಗಿಸುವಿಕೆ | | | | |
| 4 | ಪ್ರಧಾನ ಮಂತ್ರಿ ಗ್ರಾಮ ಸಡಕ್ ಯೋಜನೆ ಅನುಷ್ಠಾನದ ಪರಾಮರ್ಶೆ | | | | |
| 5 | ಇತರೆ | | | | |
| | ಒಟ್ಟು | | | | |

- ಆರ್ಥಿಕ ಗುರಿ ಪ್ರಗತಿ ಲಭ್ಯವಾಗದ ಯೋಜನೆಗಳಡಿ ಭೌತಿಕ ಪ್ರಗತಿ ಮಾಹಿತಿ ನೀಡುವುದು.